ಗೌರಿಬಿದನೂರು ತಾಲ್ಲೂಕಿನಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಶಾಲೆ ಪ್ರಾರಂಭ

57(252) ಶ್ರೀ ಶಿವಶಂಕರ ರೆಡ್ಡಿ ಎನ್. ಎಚ್. (ಗೌರಿಬಿದನೂರು): ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಕಿತ್ತೂರು ರಾಣಿ ಚನ್ನಮ್ಮ ಶಾಲೆಯನ್ನು ಪ್ರಾರಂಭಿಸಲು ಈಗಾಗಲೇ ಅರ್ಧ ಎಕರೆ ಜಮೀನನ್ನು ಮಂಜೂರು ಮಾಡಿದ್ದು, ಇದುವರೆವಿಗೂ ಕಟ್ಟಡ ಸ್ಥಾಪನೆಯಾಗಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ ಕಟ್ಟಡ ಸ್ಥಾಪಿಸಲು ಅನುದಾನ ಮಂಜೂರು ಮಾಡಿ ಈ ವಿಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೂಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ. ನಾರಾಯಣಸ್ವಾಮಿ (ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು):

ಅ) ಮತ್ತು ಆ) ಹೌದು. ಗೌರಿಬಿದನೂರು ತಾಲ್ಲೂಕಿನ ನಗರಗೆರೆ ಹೋಬಳಿ ಮಣಿವಾಲ ಗ್ರಾಮದಲ್ಲಿ ಸರ್ವೇ ಸಂಖ್ಯೆ 29ರಲ್ಲಿ 10.00 ಎಕರೆ ಜಮೀನನ್ನು ಕಿತ್ತೂರು ರಾಣಿ ಚನ್ನಮ್ಮ ಬಾಲಕಿಯರ ವಸತಿ ಶಾಲೆಯ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ಪಡೆಯಲು ಕ್ರಮ ಜರುಗಿಸಲಾಗುತ್ತಿದೆ. ಜಮೀನು ಮಂಜೂರಾದ ತಕ್ಷಣ ಶಾಲಾ ಕಟ್ಟಡ ಸಂಕೀರ್ಣ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಡ್ಯಾಂನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು

58(258) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ.

ಅ) ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಡ್ಯಾಂನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 50 ಹಾಸಿಗೆಯಿಂದ 100 ಹಾಸಿಗೆಗೆ ಮೇಲ್ದರ್ಜೆ ಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ದಿಸೆಯಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು);

ಇ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 50 ಹಾಸಿಗೆಯಿಂದ 100 ಹಾಸಿಗೆಗೆ ಮೇಲ್ದರ್ಜೆಗೇರಿಸಿದರೆ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿರುವ ಈ ಭಾಗದ ಬಡರೋಗಿಗಳಿಗೆ ತುಂಬಾ ಅನುಕೂಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಮೇಲ್ದರ್ಜೆಗೇರಿಸಲಾಗಿದೆಯೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಈ ಕುರಿತು ಪ್ರಸ್ತಾವನೆ ಸ್ವೀಕೃತವಾಗಿದೆ.

ಆ) & ಇ) ಕೊಪ್ಪಳ ತಾಲ್ಲೂಕಿನ ಮುನಿರಾಬಾದ್‌ನಲ್ಲಿ 30 ಹಾಸಿಗೆಯ ಸಮುದಾಯ ಭವನ ಆರೋಗ್ಯ ಕೇಂದ್ರವು ಕಾರ್ಯ ನಿರ್ವಹಿಸುತ್ತಿದೆ. 2009–10ನೇ ಸಾಲಿನಲ್ಲಿ ಸದರಿ ಸಮುದಾಯ ಆರೋಗ್ಯ ಕೇಂದ್ರದ ಹಾಸಿಗೆ ಬಳಕೆ ಪ್ರಮಾಣ ಶೇ.22ರಷ್ಟು ಆಗಿದೆ. ಆದುದರಿಂದ ಈ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಅವಕಾಶವಿರುವುದಿಲ್ಲ.

ಅನುಬಂಧ – II

ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರ

ಬಿಜಾಪುರ ನಗರದ ಜಲನಗರದಲ್ಲಿ ಪೋಲೀಸ್ ಠಾಣೆ ಮಂಜೂರು ಮಾಡುವುದು

129(122) ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ ನಗರ): ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?.

ಅ) ಬಿಜಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದು, ದಿನಕಳೆದಂತೆ ನಗರವು ತನ್ನ ವ್ಯಾಪ್ತಿಯನ್ನು ವಿಸ್ತರಿಸುತ್ತಿದ್ದು, ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಪೊಲೀಸ್ ಠಾಣೆಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;